## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1080 |
| ಸದಸ್ಯರ ಹೆಸರು | ಶ್ರೀ ದಿನೇಶ್ ಗೂಳಿಗೌಡ |
| ಉತ್ತರಿಸುವ ದಿನಾಂಕ | 18.12.2024 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಿಂದ ಶ್ರೀ ಚಾಮುಂಡೇಶ್ವರಿ ದೇವಾಲಯದ ಹುಂಡಿಯಲ್ಲಿ ಸಂಗ್ರಹವಾಗಿರುವ ಮೊತ್ತವೆಷ್ಟು; (ವರ್ಷವಾರು ವಿವರ ನೀಡುವುದು) | ಮೈಸೂರು ಜಿಲ್ಲೆ ಶ್ರೀ ಚಾಮುಂಡೇಶ್ವರಿ ದೇವಾಲಯದ ಹುಂಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಂಗ್ರಹವಾಗಿರುವ ಮೊತ್ತದ ವಿವರ ಕೆಳಕಂಡಂತಿರುತ್ತದೆ. (ಕೆಳಗಿನ ಕೋಷ್ಟಕಗಳನ್ನು ನೋಡಿ) |

| ಕ್ರ. ಸಂ. | ವರ್ಷ | ಹುಂಡಿಗಳಲ್ಲಿ ಸಂಗ್ರಹವಾದ ಮೊತ್ತ (ರೂ.ಗಳಲ್ಲಿ) |
|---|---|---|
| 1 | 2021-22 | 8,93,04,955.00 |
| 2 | 2022-23 | 15,52,94,412.00 |
| 3 | 2023-24 | 15,84,03,723.00 |

ಶ್ರೀ ಚಾಮುಂಡೇಶ್ವರಿ ದೇವಾಲಯದ ಹುಂಡಿಯಲ್ಲಿ ಸಂಗ್ರಹವಾಗುವ ಆದಾಯ ಸೇರಿದಂತೆ ದೇವಾಲಯಕ್ಕೆ ಎಲ್ಲಾ ಮೂಲಗಳಿಂದಲೂ ಬರುವ ಆದಾಯವನ್ನು ಒಟ್ಟಾರೆಯಾಗಿ ದೇವಾಲಯಕ್ಕೆ ಮಂಜೂರಾದ ವಾರ್ಷಿಕ ಆಯವ್ಯಯದಂತೆ ವೆಚ್ಚ ಮಾಡಲಾಗುತ್ತದೆ. ಕಳೆದ ಮೂರು ವರ್ಷಗಳ ಆದಾಯ- ವೆಚ್ಚ ಮತ್ತು ಉಳಿತಾಯ ವಿವರ ಈ ಕೆಳಕಂಡಂತಿದೆ.

| ಕ್ರ. ಸಂ. | ವರ್ಷ | ವಾರ್ಷಿಕ ಆದಾಯ (ರೂ.ಗಳಲ್ಲಿ) | ವಾರ್ಷಿಕ ವೆಚ್ಚ (ರೂ. ಗಳಲ್ಲಿ) | ಉಳಿತಾಯ |
|---|---|---|---|---|
| 1 | 2021-22 | 21,92,63,404.00 | 18,92,61,645.00 | 3,00,01,759.00 |
| 2 | 2022-23 | 45,50,58,708.00 | 32,75,94,818.00 | 12,74,63,890.00 |
| 3 | 2023-24 | 49,64,30,204.00 | 21,46,05,523.00 | 28,18,24,681.00 |

| | ಪ್ರಶ್ನೆ | ಉತ್ತರ |
|---|---|---|
| ಆ) | ಸಂಗ್ರಹವಾದ ಹುಂಡಿಯ ಕಾಣಿಕೆಗಳನ್ನು ಯಾವ ಯಾವ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾಗುತ್ತಿದೆ ಹಾಗೂ ಕಳೆದ 3 ವರ್ಷಗಳಿಂದ ಹುಂಡಿಯಲ್ಲಿ ವೆಚ್ಚ ಮಾಡದೆ ಉಳಿದಿರುವ ಮೊತ್ತವೆಷ್ಟು; (ವರ್ಷವಾರು ವಿವರ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಹುಂಡಿಯಲ್ಲಿ ಸಂಗ್ರಹವಾದ ಕಾಣಿಕೆಯನ್ನು ದೇವಾಲಯದ ಉಳಿತಾಯ ಖಾತೆಗೆ ಜಮಾ ಮಾಡಿ ಸದರಿ ಮೊತ್ತವನ್ನು ದೇವಾಲಯಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮತ್ತು ದೇವಾಲಯದಲ್ಲಿ ಜರುಗುವ ದೈನಂದಿನ ಧಾರ್ಮಿಕ ಕಾರ್ಯಗಳಿಗೆ ಹಾಗೂ ಪ್ರಾಧಿಕಾರದಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳಿಗೆ ವೇತನ ಪಾವತಿಸಲು ವಿನಿಯೋಗಿಸಲಾಗಿರುತ್ತಿದೆ. |
| ಇ) | ನಾಡದೇವಿ ಶ್ರೀ ಚಾಮುಂಡೇಶ್ವರಿ ದೇವಿಗೆ ಭಕ್ತಾದಿಗಳಿಂದ ಹಾಗೂ ಮುಜರಾಯಿ ಇಲಾಖೆಯಿಂದ ಚಿನ್ನದ ರಥ ನಿರ್ಮಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; | ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಪ್ರಥಮ ಸಭೆಯು ದಿನಾಂಕ:03.09.2024 ರಂದು ಮಾನ್ಯ ಮುಖ್ಯಮಂತ್ರಿಗಳು ಹಾಗೂ ಪ್ರಾಧಿಕಾರುದ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಚಾಮುಂಡಿ ಬೆಟ್ಟದಲ್ಲಿ ಜರುಗಿದ ಸಭೆಯ ಕಾರ್ಯಸೂಚಿ (ಅಜೆಂಡಾ)ಯ ವಿಷಯ 08 ರ ಕ್ರಮ ಸಂಖ್ಯೆ 03 ರಲ್ಲಿ ಚಿನ್ನದ ರಥ ನಿರ್ಮಾಣ ಕಾರ್ಯ ಕೈಗೊಳ್ಳುವ ಸಂಬಂಧ ತೀರ್ಮಾನವಾಗಿದ್ದು, ಅದರಂತೆ ಕ್ರಮವಹಿಸಲಾಗುವುದು. ಚಿನ್ನದ ರಥದ ನಿರ್ಮಾಣಕ್ಕಾಗಿ ಭಕ್ತಾದಿಗಳಿಂದ ದೇಣಿಗೆ ಸಂಗ್ರಹಿಸಲು ಪ್ರತ್ಯೇಕ ಹುಂಡಿಯನ್ನು ತೆರೆಯಲು ತೀರ್ಮಾನಿಸಲಾಗಿದೆ. ಈ ಪ್ರಕ್ರಿಯೆ ಪ್ರಾರಂಭಿಕ ಹಂತದಲ್ಲಿರುವುದರಿಂದ ಕಾಲಮಿತಿಯನ್ನು ನಿಗಧಿಪಡಿಸಲು ಸಾಧ್ಯವಿರುವುದಿಲ್ಲ. |
| ಈ) | ಮಾನ್ಯ ಮುಖ್ಯಮಂತ್ರಿಗಳು ಚಿನ್ನದ ರಥ ನಿರ್ಮಿಸುವ ಸಂಬಂಧ ಪ್ರಸ್ತಾವನೆ ಮಂಡಿಸಲು ಸೂಚಿಸಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪ್ರಸ್ತುತ ಪ್ರಸ್ತಾವನೆಯೂ ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗಾಗಿ ಚಿನ್ನದ ರಥವನ್ನು ನಿರ್ಮಿಸಲಾಗುವುದು; | |
| ಉ) | ಚಾಮುಂಡೇಶ್ವರಿ ದೇವಿಗೆ ಚಿನ್ನದ ರಥ ನಿರ್ಮಿಸಲು ಭಕ್ತಾದಿಗಳಿಂದ ದೇಣಿಗೆ ಸಂಗ್ರಹಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ? (ವಿವರಗಳನ್ನು ಒದಗಿಸುವುದು) | |

ಸಂಖ್ಯೆ: ಕಂಇ 186 ಮುಸಪ್ರ 2024

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು